# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 11(294)
ಸದಸ್ಯರ ಹೆಸರು : ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ),
ಉತ್ತರಿಸಬೇಕಾದ ದಿನಾಂಕ : 13.09.2021
ಉತ್ತರಿಸುವ ಸಚಿವರು : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | 1995ರ ನಂತರದಿಂದ ಆರಂಭವಾದ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು; ಇಲಾಖೆಯಲ್ಲಿ ಈ ಕುರಿತು ಸಭೆ ನಡೆಸಲಾಗಿದೆಯೇ; | 1995 ರ ನಂತರ ಆರಂಭವಾದ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ಹಿಂದಿನ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ, ಮಾನ್ಯ ವಿಧಾನ ಪರಿಷತ್ ಸದಸ್ಯರು ಹಾಗೂ ಹಾಲಿ ಸಭಾಪತಿ ರವರ ಸಮ್ಮುಖದಲ್ಲಿ ಏರ್ಪಡಿಸಲಾಗಿದ್ದ ಸಭೆಯಲ್ಲಿ, ಸದರಿ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ 1995 ರಿಂದ 2019 ರವರೆಗೆ ಪ್ರತಿ 5 ವರ್ಷದ ಬ್ಲಾಕ್ ಅವಧಿಯಲ್ಲಿ ಪ್ರಾರಂಭಿಸಲಾಗಿರುವ ಶಾಲಾ ಕಾಲೇಜುಗಳಲ್ಲಿ ಎಷ್ಟು ಶಿಕ್ಷಕರು / ಉಪನ್ಯಾಸಕರುಗಳು /ಬೋಧಕೇತರುಗಳು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಇವರುಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ ವಾರ್ಷಿಕವಾಗಿ ತಗಲುವ ಅಂದಾಜು ವೆಚ್ಚದ ಮಾಹಿತಿಯನ್ನು ಆಯುಕ್ತಾಲಯಗಳು ಮತ್ತು ಪದವಿ ಪೂರ್ವ ನಿರ್ದೇಶನಾಲಯದಿಂದ ಪಡೆದು ಪರಿಶೀಲಿಸಲಾಗುತ್ತಿದೆ. |
| ಆ. | ಹೌದಾದಲ್ಲಿ, ಯಾವ ವರ್ಷದವರೆಗೆ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರ ಚಿಂತಿಸಿದೆ : ಇದರಿಂದ ಸರ್ಕಾರಕ್ಕೆ ತಗಲುವ ಅಂದಾಜು ವೆಚ್ಚ ಎಷ್ಟು: | |
| ಇ. | ಎಷ್ಟು ಶಾಲಾ ಕಾಲೇಜುಗಳಿಗೆ ಅನುದಾನ ಒದಗಿಸಲಾಗುವುದು? (ಪಟ್ಟಿ ಒದಗಿಸುವುದು) | |

ಇಪಿ 167 ಪಿಎಂಸಿ 2021

[ಬಿ.ಸಿ. ನಾಗೇಶ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.